ದಂತ ಭಾಗ್ಯ ಯೋಜನೆ

3272 (2554); ಶ್ರೀ ಗೋಪಾಲಯ್ಯ ಕೆ. (ಮಹಾಲಕ್ಷ್ಮೀ ಲೇಔಟ್)

ಅ) ಹಿರಿಯ ನಾಗರೀಕರಿಗೆ ಬಿಪಿಎಲ್ ಕಾರ್ಡುದಾರರಿಗೆ ಉಚಿತ ಕೃತಕ ಹಲ್ಲು (ದಂತಭಾಗ್ಯ) ನೀಡುವ ಯೋಜನೆಯನ್ನು ಸರ್ಕಾರ ಅನುಷ್ಠಾನಗೊಳಿಸಿದೆಯೇ;

ಆ) ಅನುಷ್ಠಾನಗೊಳಿಸಿದ್ದರೆ, ಇಲ್ಲಿಯವರೆಗೆ ಎಷ್ಟು ಜನರಿಗೆ ಉಚಿತ ಕೃತಕ ಹಲ್ಲುಗಳನ್ನು ನೀಡಲಾಗಿದೆ?

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಹೌದು

ಆ) ಇಲ್ಲಿಯವರೆಗೆ 21 ಜನರಿಗೆ ಉಚಿತ ಕೃತಕ ಹಲ್ಲುಗಳನ್ನು ನೀಡಲಾಗಿದೆ.

ಖೊಟ್ಟಿ ಜಾತಿ ಪ್ರಮಾಣ ಪತ್ರ

3273 (2555); ಶ್ರೀ ಗೋಪಾಲಯ್ಯ ಕೆ. (ಮಹಾಲಕ್ಷ್ಮೀ ಲೇಔಟ್)

ಅ) ರಾಜ್ಯದಲ್ಲಿ ಖೊಟ್ಟಿ ಜಾತಿ ಪ್ರಮಾಣ ಪತ್ರ ಪಡೆದು ಸರ್ಕಾರಿ ನೌಕರಿ ಪಡೆದುಕೊಂಡ ನೌಕರರು ಹಾಗೂ ಅಧಿಕಾರಿಗಳ ಸಂಖ್ಯೆ ಎಷ್ಟು;

ಆ) ಈ ರೀತಿ ಖೊಟ್ಟಿ ಜಾತಿ ಪ್ರಮಾಣ ಪತ್ರ ಪಡೆದ ಸರ್ಕಾರಿ ನೌಕರರನ್ನು ಗುರುತಿಸಲು ಕೈಗೊಂಡ ಕ್ರಮಗಳೇನು;

ಇ) ಖೊಟ್ಟಿ ಜಾತಿ ಪ್ರಮಾಣ ಪತ್ರಗಳನ್ನು ಪಡೆದು ಸರ್ಕಾರಿ ಸೌಲಭ್ಯ ಪಡೆದುಕೊಳ್ಳುವವರ ವಿರುದ್ಧ ಕಠಿಣ ಕ್ರಮಕೈಗೊಳ್ಳಲು ಸೂಕ್ತ ಕಾನೂನು ರಚಿಸಲಾಗುತ್ತದೆಯೇ?

ಶ್ರೀ ಹೆಚ್. ಆಂಜನೇಯ (ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ) ಸುಳ್ಳು ಜಾತಿ ಪ್ರಮಾಣ ಪತ್ರ ಪಡೆದು ಸರ್ಕಾರಿ ನೌಕರಿ ಪಡೆದ ಅಧಿಕಾರಿ ಮತ್ತು ಸಿಬ್ಬಂದಿಗಳ ಸಂಖ್ಯೆ: 569

ಆ) ಸುಳ್ಳು ಜಾತಿ ಪ್ರಮಾಣ ಪತ್ರ ಪಡೆದು ಸರ್ಕಾರಿ ಉದ್ಯೋಗ ಮತ್ತು ಶೈಕ್ಷಣಿಕ ಮೀಸಲಾತಿ ಪಡೆದವರ ವಿರುದ್ಧ ದೂರು / ಮಾಹಿತಿ ಸಿಕ್ಕ ತಕ್ಷಣವೇ ವಿಚಾರಣೆ ಕೈಗೊಳ್ಳಲಾಗುತ್ತಿದೆ. ವಿಚಾರಣೆ ಸಾಬೀತಾದಲ್ಲಿ ಸುಳ್ಳು ಜಾತಿ ಪ್ರಮಾಣ ಪತ್ರವನ್ನು ರದ್ದುಪಡಿಸಿ, ಅವರ ವಿರುದ್ಧ ಎಫ್.ಐ.ಆರ್ ದಾಖಲಿಸಿ, ಆರೋಪಿತರನ್ನು ಬಂಧಿಸಿ ಸೇವೆಯಿಂದ ವಜಾಗೊಳಿಸಲು ಕ್ರಮಕೈಗೊಂಡು ಅವರ ಆರ್ಥಿಕ ಸೌಲಭ್ಯವನ್ನು ಹಿಂಪಡೆಯಲು ಕ್ರಮಕೈಗೊಳ್ಳಲಾಗುತ್ತಿದೆ.

ಇ) ಸುಳ್ಳು ಜಾತಿ ಪ್ರಮಾಣ ಪತ್ರ ಪಡೆದು ಸರ್ಕಾರಿ ಸೌಲಭ್ಯ ಪಡೆದವರ ವಿರುದ್ಧ ಆರೋಪ ಸಾಬೀತಾದಲ್ಲಿ ಅವರ ವಿರುದ್ಧ ಈಗಾಗಲೇ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ದೌರ್ಜನ್ಯ ತಡೆ) ಕಾಯ್ದೆ 1989, ಮತ್ತು ಭಾರತೀಯ ದಂಡ ಸಂಹಿತೆ ಪ್ರಕಾರ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುತ್ತಿದೆ.

ನಿರುದ್ಯೋಗಿ ಯುವಕರಿಗೆ ತರಬೇತಿ

3274 (2556); ಶ್ರೀ ಗೋಪಾಲಯ್ಯ ಕೆ. (ಮಹಾಲಕ್ಷ್ಮೀ ಲೇಔಟ್)

ಅ) ಬೆಂಗಳೂರು ನಗರದ ನಿರುದ್ಯೋಗಿ ಯುವಕರಿಗೆ ಮೊಬೈಲ್ ರಿಪೇರಿ ಹಾಗೂ ಇತರೆ ಸ್ವಯಂ ಉದ್ಯೋಗ ತರಬೇತಿ ನೀಡಲು ನೇರವಾಗಿ ಅರ್ಜಿ ಕರೆಯಲಾಗುವುದೇ?

ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಿಂದ ಪಟ್ಟಿಯನ್ನು ಪಡೆದುಕೊಂಡು ತರಬೇತಿ ನೀಡುವ ಪದ್ಧತಿಯನ್ನು ಕೈಬಿಡಲಾಗುವುದೇ?